ಅಧ್ಯಕ್ಷರು : ಮಂಡಿಸಲಾಯಿತು.

ಅಧ್ಯಕ್ಷರು : ಈಗ ಸಭೆಯ ಮುಂದಿಡಲಾಗುವ ಕಾಗದ ಪತ್ರಗಳು.

(ಪಟ್ಟಿಯನ್ನು ಲಗತ್ತಿಸಲಾಗಿದೆ)

ಸಭೆಯ ಮುಂದಿಡಲಾಗುವ ಕಾಗದ ಪತ್ರಗಳು

ಶ್ರೀ ಎಂ.ಪಿ. ಪ್ರಕಾಶ್ (ಕಂದಾಯ ಸಚಿವರು) (ಮಾನ್ಯ ಮುಖ್ಯಮಂತ್ರಿಯವರ ಪರವಾಗಿ): ಮಾನ್ಯ ಅಧ್ಯಕ್ಷರೇ, ಭಾರತ ಸಂವಿಧಾನದ 151 (2) ನೇ ಅನುಚ್ಛೇದದ ಮೇರೆಗೆ ದಿನಾಂಕ 31ನೇ ಮಾರ್ಚ್ 2004ಕ್ಕೆ ಕೊನೆಗೊಂಡ ವರ್ಷಕ್ಕೆ ಭಾರತದ ನಿಯಂತ್ರಕರು ಮತ್ತು ಮಹಾಲೆಕ್ಕ ಪರಿಶೋಧಕರು ನೀಡಿರುವ ಧನವಿನಿಯೋಗ ಹಾಗೂ ಹಣಕಾಸು ಲೆಕ್ಕಪತ್ರಗಳನ್ನು ಸಭೆಯ ಮುಂದೆ ಮಂಡಿಸುತ್ತೇನೆ.

ಅಧ್ಯಕ್ಷರು : ಮಂಡಿಸಲಾಯಿತು.

I **ಶ್ರೀ ಎನ್. ಧರ್ಮಸಿಂಗ್ (ಮುಖ್ಯಮಂತ್ರಿ) ಅವರು :-**

ಭಾರತ ಸಂವಿಧಾನದ ಅನುಚ್ಛೇದ 323ರ ಪರಿಚ್ಛೇದ (2)ರ ಅನ್ವಯದ ಮೇರೆಗೆ :

1. ಕರ್ನಾಟಕ ಲೋಕಸೇವಾ ಆಯೋಗದ 2002-03ನೇ ಸಾಲಿನ ವಾರ್ಷಿಕ ವರದಿ.

1987ರ ಕರ್ನಾಟಕ ನಗರಾಭಿವೃದ್ಧಿ ಪ್ರಾಧಿಕಾರದ ಅಧಿನಿಯಮ 48 (5) ಮತ್ತು 49ನೇ ಪ್ರಕರಣದ ಮೇರೆಗೆ :

1. ಗದಗ-ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರದ 2002-03ನೇ ಸಾಲಿನ ವಾರ್ಷಿಕ ವರದಿ.
2. ಹೊಸಪೇಟೆ ನಗರಾಭಿವೃದ್ಧಿ ಪ್ರಾಧಿಕಾರದ 2003-04ನೇ ಸಾಲಿನ ಲೆಕ್ಕ ತನಿಖಾ ವರದಿ.
3. ಗುಲ್ಬರ್ಗಾ ನಗರಾಭಿವೃದ್ಧಿ ಪ್ರಾಧಿಕಾರದ 2004-05ನೇ ಸಾಲಿನ ವಾರ್ಷಿಕ ವರದಿ.
4. ಬೀದರ್ ನಗರಾಭಿವೃದ್ಧಿ ಪ್ರಾಧಿಕಾರದ 2004-05ನೇ ಸಾಲಿನ ವಾರ್ಷಿಕ

ವರದಿ.

5. ಚಾಮರಾಜನಗರ–ರಾಮಸಮುದ್ರ ನಗರಾಭಿವೃದ್ಧಿ ಪ್ರಾಧಿಕಾರದ 2001–02ನೇ ಸಾಲಿನ ಲೆಕ್ಕಪರಿಶೋಧನಾ ವರದಿ ಹಾಗೂ ಅನುಷ್ಠಾನ ವರದಿ.

6. ಚಾಮರಾಜನಗರ–ರಾಮಸಮುದ್ರ ನಗರಾಭಿವೃದ್ಧಿ ಪ್ರಾಧಿಕಾರದ 2002–03 ಹಾಗೂ 2003–04ನೇ ಸಾಲಿನ ಲೆಕ್ಕಪರಿಶೋಧನಾ ವರದಿ ಹಾಗೂ ಅನುಷ್ಠಾನ ವರದಿ.

1964ರ ಬೆಂಗಳೂರು ಜಲಮಂಡಳಿಯ ಅಧಿನಿಯಮ, 17(1)ರ ಪ್ರಕರಣದ ಮೇರೆಗೆ :

1. ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ, ಕಾವೇರಿ ಭವನ, ಬೆಂಗಳೂರಿನ 2004–05ನೇ ಸಾಲಿನ ಪರಿಷ್ಕೃತ ಆಯವ್ಯಯ ಪಟ್ಟಿ ಹಾಗೂ 2005–06ನೇ ಸಾಲಿನ ಆಯವ್ಯಯ ಪಟ್ಟಿಯನ್ನು ಮಂಡಿಸುವುದು.

II ಶ್ರೀ ಮಲ್ಲಿಕಾರ್ಜುನ ಖರ್ಗೆ (ಜಲಸಂಪನ್ಮೂಲ ಮತ್ತು ಸಾರಿಗೆ ಸಚಿವರು) ಅವರು:–

1980ರ ಅಚ್ಚುಕಟ್ಟು ಪ್ರದೇಶಾಭಿವೃದ್ಧಿ ಅಧಿನಿಯಮ 25ರನ್ವಯ :

1. ಅಚ್ಚುಕಟ್ಟು ಅಭಿವೃದ್ಧಿ ಪ್ರಾಧಿಕಾರ, ಕಾವೇರಿ ಜಲಾನಯನ ಯೋಜನೆಗಳು ಮೈಸೂರಿನ 2002–03ನೇ ಸಾಲಿನ ವರಹಾನ ಲೆಕ್ಕಪತ್ರ ಪರಿಶೋಧನ ವರದಿಯ ವಿವರಗಳು.

2. ಅಚ್ಚುಕಟ್ಟು ಪ್ರದೇಶಾಭಿವೃದ್ಧಿ ಮಲಪ್ರಭಾ ಘಟಪ್ರಭಾ ಯೋಜನೆಗಳು ಬೆಳಗಾವಿಯ 2003–04ನೇ ಸಾಲಿನ ವಾರ್ಷಿಕ ವರದಿಯನ್ನು ಮಂಡಿಸುವುದು.

III ಶ್ರೀ ಪಿ.ಜಿ.ಆರ್. ಸಿಂಧ್ಯಾ (ಬೃಹತ್ ಹಾಗೂ ಮಧ್ಯಮ ಕೈಗಾರಿಕೆ, ಸಣ್ಣ ಕೈಗಾರಿಕೆ ಮತ್ತು ಮೂಲಭೂತ ಸೌಕರ್ಯ ಅಭಿವೃದ್ಧಿ ಸಚಿವರು) ಅವರು :–

1956ರ ಕಂಪನಿ ಅಧಿನಿಯಮ 619(ಎ) ಪ್ರಕರಣದ ಮೇರೆಗೆ :

1. ಕರ್ನಾಟಕ ವಿದ್ಯುತ್ ಕಾರ್ಖಾನೆ ನಿಯಮಿತದ 2003–04ನೇ ಸಾಲಿನ 28ನೇ ವಾರ್ಷಿಕ ವರದಿ ಮತ್ತು ಲೆಕ್ಕಪತ್ರಗಳು.

2. ಕರ್ನಾಟಕ ಸೋಪ್ಸ್ ಅಂಡ್ ಡಿಟರ್ಜೆಂಟ್ಸ್ ನಿಯಮಿತದ 2003–04ನೇ ಸಾಲಿನ 24ನೇ ವಾರ್ಷಿಕ ವರದಿ ಮತ್ತು ಲೆಕ್ಕಪರಿಶೋಧನಾ ವರದಿಗಳನ್ನು ಮಂಡಿಸುವುದು.

IV ಶ್ರೀ ಡಿ. ಮಂಜುನಾಥ್ (ಉನ್ನತ ಶಿಕ್ಷಣ ಸಚಿವರು) ಅವರು :–

2000ರ ಕರ್ನಾಟಕ ರಾಜ್ಯ ವಿಶ್ವವಿದ್ಯಾಲಯದ ಅಧಿನಿಯಮ 50(2)ರ ಮೇರೆಗೆ:

1. ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯ, ಬೆಳಗಾವಿಯ 2003–04ನೇ ಸಾಲಿನ ವಾರ್ಷಿಕ ವರದಿ.

2. ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾಲಯ, ಮಾನಸ ಗಂಗೋತ್ರಿ, ಮೈಸೂರಿನ 2002–03ನೇ ಸಾಲಿನ ಲೆಕ್ಕ ತನಿಖಾವರದಿ ಮತ್ತು ವಾರ್ಷಿಕ ಲೆಕ್ಕಗಳನ್ನು ಮಂಡಿಸುವುದು.

V ಶ್ರೀ ಹೆಚ್.ಡಿ. ರೇವಣ್ಣ (ಲೋಕೋಪಯೋಗಿ ಮತ್ತು ಇಂಧನ ಸಚಿವರು) ಅವರು :–

1956ರ ಕಂಪನಿ ಅಧಿನಿಯಮ 619(ಎ) ಪ್ರಕರಣದ ಮೇರೆಗೆ :

1. ಮಂಗಳೂರು ವಿದ್ಯುಚ್ಛಕ್ತಿ ಸರಬರಾಜು ಕಂಪನಿ (ಮೆಸ್ಕಾಂ) ನಿಯಮಿತ ಮಂಗಳೂರಿನ 2003–04ನೇ ಸಾಲಿನ 2ನೇ ವಾರ್ಷಿಕ ವರದಿ ಹಾಗೂ ಲೆಕ್ಕಪತ್ರಗಳ ವರದಿ.

2. ವಿಶ್ವೇಶ್ವರಯ್ಯ ವಿದ್ಯುತ್ ನಿಗಮ ನಿಯಮಿತದ 2003–04ನೇ ಸಾಲಿನ 5ನೇ ವಾರ್ಷಿಕ ಮತ್ತು ಲೆಕ್ಕಪತ್ರಗಳು.

3. ಕೊಂಕಣ ರೈಲ್ವೆ ಕಾರ್ಪೋರೇಷನ್ ನಿಯಮಿತದ 2003–04ನೇ ಸಾಲಿನ ವಾರ್ಷಿಕ ವರದಿ ಹಾಗೂ ಲೆಕ್ಕಪರಿಶೋಧನಾ ವರದಿ.

4. ಕರ್ನಾಟಕ ರಾಜ್ಯ ನಿರ್ಮಾಣ ನಿಗಮ ನಿಯಮಿತ, ಬೆಂಗಳೂರಿನ 2002–03ನೇ ಸಾಲಿನ ವಾರ್ಷಿಕ ವರದಿಗಳನ್ನು ಮಂಡಿಸುವುದು.

VI ಡಾ: ಹೆಚ್.ಸಿ. ಮಹದೇವಪ್ಪ (ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಸಚಿವರು) ಅವರು :-

1993ರ ಕರ್ನಾಟಕ ಪಂಚಾಯತ್ ರಾಜ್ ಅಧಿನಿಯಮ 262(3)ನೇ ಮತ್ತು 300(5)ನೇ ಪ್ರಕರಣದ ಮೇರೆಗೆ :

1. ಚಾಮರಾಜನಗರ ಜಿಲ್ಲಾ ಪಂಚಾಯತ್‌ನ 2000–01ನೇ ಸಾಲಿನ ವಾರ್ಷಿಕ ಲೆಕ್ಕಪತ್ರ ವರದಿ.
2. ತುಮಕೂರು ಜಿಲ್ಲಾ ಪಂಚಾಯತ್‌ನ 2001–02ನೇ ಸಾಲಿನ ಲೆಕ್ಕಪತ್ರಗಳ ಲೆಕ್ಕಪರಿಶೋಧನಾ ವರದಿ.
3. ಮಂಡ್ಯ ಜಿಲ್ಲಾ ಪಂಚಾಯತ್‌ನ 2001–02ನೇ ಸಾಲಿನ ವಾರ್ಷಿಕ ಲೆಕ್ಕಪತ್ರ ವರದಿ.
4. ಮೈಸೂರು ಜಿಲ್ಲಾ ಪಂಚಾಯತ್‌ನ ಕಾರ್ಯಾಲಯದ 2003–04ನೇ ಸಾಲಿನ ವಾರ್ಷಿಕ ವರದಿ.
5. ರಾಯಚೂರು ಜಿಲ್ಲಾ ಪಂಚಾಯತ್‌ನ 2003–04ನೇ ಸಾಲಿನ ವಾರ್ಷಿಕ ಆಡಳಿತ ವರದಿ.
6. ಶಿವಮೊಗ್ಗ ಜಿಲ್ಲಾ ಪಂಚಾಯತ್‌ನ 2001–02ನೇ ಸಾಲಿನ ವಾರ್ಷಿಕ ಲೆಕ್ಕಪತ್ರಗಳು ಮತ್ತು ಆಡಿಟ್ ವರದಿ.
7. ಹಾವೇರಿ ಜಿಲ್ಲಾ ಪಂಚಾಯತ್‌ನ 2003–04ನೇ ಸಾಲಿನ ವಾರ್ಷಿಕ ಆಡಳಿತ ವರದಿ.
8. ಬೆಂಗಳೂರು ಗ್ರಾಮಾಂತರ ಜಿಲ್ಲಾ ಪಂಚಾಯತ್‌ನ 2003–04ನೇ ಸಾಲಿನ ವಾರ್ಷಿಕ ಆಡಳಿತ ವರದಿ.
9. ಉಡುಪಿ ಜಿಲ್ಲಾ ಪಂಚಾಯತ್‌ನ 2001–02ನೇ ಸಾಲಿನ ವಾರ್ಷಿಕ ಲೆಕ್ಕಗಳು ಮತ್ತು ಆಡಿಟ್ ವರದಿ.
10. ಕೋಲಾರ ಜಿಲ್ಲಾ ಪಂಚಾಯತ್‌ನ 2003–04ನೇ ಸಾಲಿನ ವಾರ್ಷಿಕ ಆಡಳಿತ ವರದಿ.
11. ಹಾಸನ ಜಿಲ್ಲಾ ಪಂಚಾಯತ್‌ನ 2003–04ನೇ ಸಾಲಿನ ಆಡಳಿತ ವರದಿಗಳನ್ನು ಮಂಡಿಸುವುದು.

VII ಶ್ರೀ ಗುರುಪಾದಪ್ಪ ನಾಗಮಾರಪಲ್ಲಿ (ಅರಣ್ಯ ಮತ್ತು ಪರಿಸರ ಸಚಿವರು) ಅವರು :-

1956ರ ಕಂಪನಿ ಅಧಿನಿಯಮ 619(ಎ) ಪ್ರಕರಣದ ಮೇರೆಗೆ :

1. ಕರ್ನಾಟಕ ಗೇರು ಅಭಿವೃದ್ಧಿ ನಿಗಮ ನಿಯಮಿತದ 2002-03ನೇ ಹಾಗೂ 2003-04ನೇ ಸಾಲಿನ ವಾರ್ಷಿಕ ವರದಿ ಮತ್ತು ಲೆಕ್ಕಪರಿಶೋಧನಾ ವರದಿಗಳನ್ನು ಮಂಡಿಸುವುದು.

VIII ಶ್ರೀ ಹೆಚ್.ಕೆ. ಪಾಟೀಲ್ (ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು) ಅವರು :-

1987ರ ಕರ್ನಾಟಕ ರಾಜ್ಯ ಕಾನೂನು ಸೇವಾ ಪ್ರಾಧಿಕಾರದ ಅಧಿನಿಯಮ ಪರಿಚ್ಛೇದ 18(4)ರ ಮೇರೆಗೆ :-

1. ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರ ಬೆಂಗಳೂರಿನ 2003-04ನೇ ಸಾಲಿನ ವಾರ್ಷಿಕ ವರದಿ.
2. ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರ ಬೆಂಗಳೂರಿನ 2001-02 ಹಾಗೂ 2002-03ನೇ ಸಾಲಿನ ವಾರ್ಷಿಕ ವರದಿ ಹಾಗೂ ಲೆಕ್ಕಪರಿಶೋಧನಾ ವರದಿ.

1986ರ ಕರ್ನಾಟಕ ಕಾಯ್ದೆ 22ರ ಪರಿಚ್ಛೇದ 26(2)ರ ಮೇರೆಗೆ :

1. ನ್ಯಾಷನಲ್ ಲಾ ಸ್ಕೂಲ್ ಆಫ್ ಇಂಡಿಯಾ ಯೂನಿವರ್ಸಿಟಿ, ನಾಗರಬಾವಿ, ಬೆಂಗಳೂರಿನ 2003-04ನೇ ಸಾಲಿನ ವಾರ್ಷಿಕ ವರದಿ ಮತ್ತು ಲೆಕ್ಕಪರಿಶೋಧನಾ ವರದಿಗಳನ್ನು ಮಂಡಿಸುವುದು.

IX ಶ್ರೀ ಅಂಜನಮೂರ್ತಿ (ವಸತಿ ಸಚಿವರು) ಅವರು :-

1973ರ ಕರ್ನಾಟಕ ಕೊಳಚೆ ನಿರ್ಮೂಲನಾ ಮಂಡಳಿ ಅಧಿನಿಯಮ 19(3)ರ ಮೇರೆಗೆ :

1. ಕರ್ನಾಟಕ ಕೊಳಚೆ ನಿರ್ಮೂಲನಾ ಮಂಡಳಿ, ಬೆಂಗಳೂರು 2003-04ನೇ ಸಾಲಿನ ವಾರ್ಷಿಕ ವರದಿಯನ್ನು ಮಂಡಿಸುವುದು.

X **ಶ್ರೀ ಜಬ್ಬಾರ್‌ಖಾನ್ ಹೊನ್ನಳ್ಳಿ (ಅಲ್ಪ ಸಂಖ್ಯಾತರ ಕಲ್ಯಾಣ ಮತ್ತು ಯುವಜನಸೇವಾ ಸಚಿವರು) ಅವರು :-**

1956ರ ಕಂಪನಿ ಅಧಿನಿಯಮ 619(ಎ) ಪ್ರಕರಣದ ಮೇರೆಗೆ :

1. ಕರ್ನಾಟಕ ಅಲ್ಪ ಸಂಖ್ಯಾತರ ಅಭಿವೃದ್ಧಿ ನಿಗಮ ನಿಯಮಿತದ 2003-04ನೇ ಸಾಲಿನ ವಾರ್ಷಿಕ ವರದಿ ಮತ್ತು ಲೆಕ್ಕಪತ್ರಗಳನ್ನು ಮಂಡಿಸುವುದು.

ಅಧ್ಯಕ್ಷರು : ಈಗ ಮಾನ್ಯ ಜಿ.ವಿ. ಶ್ರೀರಾಮರೆಡ್ಡಿಯವರು ಅರ್ಜಿಯನ್ನೊಪ್ಪಿಸುವುದು.

ಅರ್ಜಿಯನ್ನೊಪ್ಪಿಸುವುದು

ಶ್ರೀ ಜಿ.ವಿ.ಶ್ರೀರಾಮರೆಡ್ಡಿ (ಬಾಗೇಪಲ್ಲಿ) : ಮಾನ್ಯ ಅಧ್ಯಕ್ಷರೇ, ಕೋಲಾರ ಜಿಲ್ಲೆಯ ರಾಬರ್ಟ್‌ಸನ್ ಪೇಟೆಯ ಗೀತಾ ಬಡಾವಣೆ ಮತ್ತು ವಿವೇಕನಗರ ಬಡಾವಣೆಗಳಲ್ಲಿ ಉಂಟಾಗುತ್ತಿರುವ ಶಬ್ದ ಮಾಲಿನ್ಯವನ್ನು ತಪ್ಪಿಸುವ ಬಗ್ಗೆ ಶ್ರೀ ಬಿ.ವಿ. ಶ್ರೀರಾಮರೆಡ್ಡಿಯವರು ಸಹಿ ಮಾಡಿರುವ ಅರ್ಜಿಯನ್ನು ಸಭೆಗೆ ಒಪ್ಪಿಸುತ್ತಿದ್ದೇನೆ.

ಅಧ್ಯಕ್ಷರು : ಅರ್ಜಿಯನ್ನು ಒಪ್ಪಿಸಲಾಯಿತು.

ಅಧ್ಯಕ್ಷರ ಅಪ್ಪಣೆ ಮೇರೆಗೆ ಪ್ರಸ್ತಾಪಿಸಲಾದ ವಿಷಯಗಳು

ವಿಷಯ : *ಆಶ್ರಯ ಸಮಿತಿಗೆ ಶಾಸಕರನ್ನು ಅಧ್ಯಕ್ಷರನ್ನಾಗಿ ನೇಮಿಸುವ ಕುರಿತು ಪಂಚಾಯತ್‌ರಾಜ್ ಬಿಲ್‌ಗೆ ತಿದ್ದುಪಡಿ ತರುವುದು.*

ಶ್ರೀ ಬಿ.ಎಸ್. ಯಡಿಯೂರಪ್ಪ (ವಿರೋಧ ಪಕ್ಷದ ನಾಯಕರು) : ಮಾನ್ಯ ಅಧ್ಯಕ್ಷರೆ, ಸದನದಲ್ಲಿ ಹಿರಿಯ ಸಚಿವರಾದಂಥ ಶ್ರೀ ಎಂ.ಪಿ. ಪ್ರಕಾಶ್‌ರವರು ಇದ್ದಾರೆ ಮತ್ತು ಮಾನ್ಯ ಆಂಜನಮೂರ್ತಿಯವರು ಇದ್ದಾರೆ. ಈಗ ನಾನು ಸರ್ಕಾರದ ಗಮನಕ್ಕೆ ತರುವುದೇನೆಂದರೆ, ಕಳೆದ ಬಾರಿ ಬಹಳ ವ್ಯಾಪಕವಾಗಿ ಚರ್ಚೆಯಾಗಿ ಆಶ್ರಯ ಸಮಿತಿಗೆ ಶಾಸಕರ ಅಧ್ಯಕ್ಷತೆಯಲ್ಲಿ ಸಮಿತಿ ಆಗಬೇಕೆನ್ನುವುದನ್ನು ಒಪ್ಪಿಕೊಂಡು, ಅದಕ್ಕೋಸ್ಕರ ಪಂಚಾಯತ್‌ರಾಜ್ ಬಿಲ್‌ಗೆ ಅಮೆಂಡ್‌ಮೆಂಟ್ ಅನ್ನು ತರುತ್ತೇವೆ ಎಂದು ಹೇಳಿದ್ದರು. ಯಾವುದೋ ಕಾರಣಕ್ಕೆ ಅದು ಮುಂದೆ ಹೋಯಿತು. ಈ ಪಂಚಾಯತ್